2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ
ಚಿಕ್ಕಮಗಳೂರು

ಸತ್ರ ಮೊಕದ್ದಮೆ ನಂಃ145/2019

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಸತೀಶ್ | ಪಿಡಬ್ಲ್ಯೂ-14 |
| ತಂದೆಯ ಹೆಸರು | - | ಸೀನ | ಸಿಡಬ್ಲ್ಯೂ -4 |
| ವಯಸ್ಸು | - | 37 ವರ್ಷ | |
| ಉದ್ಯೋಗ | - | ಕೂಲಿಕೆಲಸ | |
| ವಾಸ ಸ್ಥಳ | - | ಹುಳುವಾಗಿಲು | |

ದಿನಾಂಕಃ 17.09.2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಗೊತ್ತಿಲ್ಲ. ಚಾಸಾ.1 ಮತ್ತು ಚಾಸಾ.7 ರವರು ಗೊತ್ತಿಲ್ಲ. ಮೃತ ಮಗು ಅಮಿಷಾಳನ್ನು ಚಾಸಾ.12 ರವರ ಕೂಲಿ ಲೈನ್ ನಲ್ಲಿ ನೋಡಿದ್ದೇನೆ.

2. ಮಗು ಅಮಿಷಾ ಈಗ ಬದುಕಿಲ್ಲ. ಚಿಕ್ಕಮಗಳೂರಿನ ಜಿಲ್ಲಾ ಆಸ್ಪತ್ರೆಯಲ್ಲಿ ಮಗು ಅಮಿಷಾಳ ಮೃತದೇಹವನ್ನು ಈಗ್ಗೆ 3 ವರ್ಷಗಳ ಹಿಂದೆ ನೋಡಿದ್ದೇನೆ. ಸದರಿ ಮಗು ಎಲ್ಲಿ, ಹೇಗೆ, ಯಾವ ಕಾರಣಕ್ಕೆ ಯಾರಿಂದ ಮೃತಪಟ್ಟಿತು ಎಂದು ನನಗೆ ಗೊತ್ತಿಲ್ಲ. ಆರೋಪಿ ಮೃತ ಮಗುವಿಗೆ ಏನು ತೊಂದರೆ ಮಾಡಿದ್ದಾನೆ ಎಂದು ನನಗೆ ಗೊತ್ತಿಲ್ಲ. ಸದರಿ ಮಗುವಿನ ಸಾವಿನ ಬಗ್ಗೆ ಆರೋಪಿಯ ವಿರುದ್ಧ ದೂರು ದಾಖಲಾಗಿರುವ ವಿಚಾರ ನನಗೆ ಗೊತ್ತಿಲ್ಲ.

3. ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು ದಿನಾಂಕ 04.08.2019 ರಂದು ಶವ ಪಂಚನಾಮೆಗೆ ಸಹಕರಿಸುವಂತೆ ಪೊಲೀಸರು ನೀಡಿದ್ದಾರೆ ಎಂದು ಹೇಳಲಾದ ನೋಟೀಸು ಮತ್ತು ಅದೇ ದಿನ ಪೊಲೀಸರು ಜರುಗಿಸಿದ್ದಾರೆ ಎಂದು ಹೇಳಲಾದ ಪಂಚನಾಮೆಯಾಗಿದ್ದು ಅವುಗಳನ್ನು ಕ್ರಮವಾಗಿ ನಿಪಿ.43 ಮತ್ತು 44 ಎಂದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.43(ಎ) ಮತ್ತು 44(ಎ) ಎಂದು ಗುರುತಿಸಲಾಯಿತು. ಪೊಲೀಸರು ಹೇಳಿದ ಮೇರೆಗೆ ಸದರಿ ಸಹಿಗಳನ್ನು ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಯಲ್ಲಿ ಮಾಡಿದ್ದೇನೆ. ನನ್ನನ್ನು ಹೊರತುಪಡಿಸಿ ಸದರಿ ದಾಖಲೆಗೆ ಬೇರೆ ಯಾರೆಲ್ಲಾ ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಪಂಚನಾಮೆಗೆ ಸಹಕರಿಸುವಂತೆ ಯಾವುದೇ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ.

4. ಸಾಕ್ಷಿಯು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿರುವ ಫೋಟೋದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ ಮತ್ತು ನಿಪಿ.2 ರಿಂದ 4 ಫೋಟೋಗಳಲ್ಲಿ ಮಗು ಅಮಿಷಾಳ ಮೃತ ದೇಹವಿರುವುದಾಗಿ ನುಡಿದಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ-

5. ದಿನಾಂಕ 04.08.2019 ರಂದು ಚಿಕ್ಕಮಗಳೂರು ಜಿಲ್ಲಾ ಆಸ್ಪತ್ರೆಯಲ್ಲಿ ಚಾಸಾ.7 ರವರ ಮಗಳಾದ ಮೃತ ಅಮಿಷಾಳ ಶವ ಪಂಚನಾಮೆಗೆ ಸಹಕರಿಸುವಂತೆ ಪೊಲೀಸರು ನಿಪಿ.43 ರಂತೆ ನೋಟೀಸನ್ನು ನನಗೆ ಜಾರಿ ಮಾಡಿದ್ದರು ಎಂದರೆ ಸರಿಯಲ್ಲ. ಅದರ ಮೇರೆಗೆ ನಾನು ಸದರಿ ಶವಾಗಾರದಲ್ಲಿ ಹಾಜರಿದ್ದೆನು ಎಂದರೆ ಸರಿಯಲ್ಲ. ಆಗ ಪೊಲೀಸರು ನನ್ನ ಮತ್ತು ಸಹ ಪಂಚರಾದ ಚಾಸಾ.5 ಮತ್ತು 6 ರವರ ಸಮಕ್ಷಮ ನಿಪಿ.44 ರಂತೆ ಮಗು ಮೃತ ಅಮಿಷಾಳ ಮೃತ ದೇಹದ ಮೇಲೆ ಪಂಚನಾಮೆಯನ್ನು ಜರುಗಿಸಿದ್ದಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪಂಚಾಯ್ತಿದಾರರಾದ ನಾವು ದಿನಾಂಕ 04.08.2019 ರಂದು ಮಧ್ಯ ರಾತ್ರಿ 12.00 ರಿಂದ 1.00 ಗಂಟೆ ಸಮಯದಲ್ಲಿ ಆರೋಪಿ ಯಾವುದೋ ಆಟೋದಲ್ಲಿ ಚಾಸಾ.7 ರವರ ಮನೆಗೆ ಹೋಗಿ ಚಾಸಾ.7 ರವರಿಗೆ ಏನನ್ನೋ ಕುಡಿಸಿ ಆಕೆಗೆ ಪ್ರಜ್ಞೆ ಇಲ್ಲದಂತಾದಾಗ ಆರೋಪಿ ಯಾವುದೋ ರೀತಿಯಲ್ಲಿ ಮಗುವನ್ನು ಕೊಲೆ ಮಾಡಿ ಹೋಗಿರುವುದಾಗಿ ಅಭಿಪ್ರಾಯಪಟ್ಟಿರುತ್ತೇವೆ ಎಂದರೆ ಸರಿಯಲ್ಲ.

6. ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಸಹ ಆರೋಪಿಯೊಂದಿಗೆ ಶಾಮೀಲಾಗಿ ಅವನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿತರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.</u>**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಚಿಕ್ಕಮಗಳೂರು.

ಸಾಕ್ಷಿಯ ಸಹಿ

ಹೇಮಾ.